# Akashvani : Bangalore
# Regional Bulletin In Kannada
# 13.05.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

<u>ಮುಖ್ಯಾಂಶಗಳು</u>

**೧. ಪ್ರಧಾನಿ ನರೇಂದ್ರ ಮೋದಿ ಆಧಂಪುರದಲ್ಲಿ ವಾಯು ಯೋಧರು ಮತ್ತು ಸೈನಿಕರನ್ನು ಭೇಟಿ ಮಾಡಿ ಸಂವಾದ**

**೨. ಯೋಧರಿಗೆ ಧೈರ್ಯ ತುಂಬಲು ತಿರಂಗ ಯಾತ್ರೆ - ಬಿ ವೈ ವಿಜಯೇಂದ್ರ**

**೩. ಕಲಬುರಗಿ ನಗರದ ಕುಡಿಯುವ ನೀರು ಯೋಜನೆ ವಿಳಂಬ ಧೋರಣೆ ಅನುಸರಿಸುತ್ತಿರುವ ಎಲ್ ಅಂಡ್ ಟಿ ಕಂಪನಿ ವಿರುದ್ಧ ವರದಿ ಸಲ್ಲಿಸುವಂತೆ - ಪ್ರಿಯಾಂಕ್ ಖರ್ಗೆ ಸೂಚನೆ**

**೪. ಅಪರೇಷನ್ ಸಿಂದೂರದ ಜೊತೆಗೆ ನಾವಿದ್ದೇವೆ ಎಂದು ಸೂಚಿಸಲು ತಿರಂಗ ಯಾತ್ರೆ - ವಿರೋಧ ಪಕ್ಷದ ನಾಯಕ ಆರ್ ಅಶೋಕ್**

**೫. ಚಿತ್ರದುರ್ಗದಲ್ಲಿ ಮೇ ೧೫ ರಂದು ನಾಗರಿಕ ಸುರಕ್ಷಾ ಅಣಕು ಪ್ರದರ್ಶನ**

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಆದಂಪುರಕ್ಕೆ ಭೇಟಿ ನೀಡಿ, ಧೀರ ವಾಯು ಯೋಧರು ಹಾಗೂ ಸೈನಿಕರನ್ನು ಭೇಟಿ ಮಾಡಿದ್ದರು. " ಧೈರ್ಯ, ದೃಢ ಸಂಕಲ್ಪ ಮತ್ತು ನಿರ್ಭಯತೆಯನ್ನು ಸಾರುವವರೊಂದಿಗೆ ಸಮಯ ಕಳೆದಿದ್ದು ಬಹಳ ವಿಶೇಷ ಅನುಭವವಾಗಿತ್ತು" ಎಂದು ನರೇಂದ್ರ ಮೋದಿ ಹೇಳಿದ್ದಾರೆ. ಪ್ರಧಾನಮಂತ್ರಿ ತಮ್ಮ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ "ಇಂದು ಬೆಳಿಗ್ಗೆ, ನಾನು ಅಧಂಪುರದ ಎಎಫ್ಎಸ್ ಗೆ ಹೋಗಿ ನಮ್ಮ ಧೀರ ವಾಯು ಯೋಧರು ಮತ್ತು ಸೈನಿಕರನ್ನು ಭೇಟಿಯಾದೆ. ಧೈರ್ಯ, ದೃಢಸಂಕಲ್ಪ ಮತ್ತು ನಿರ್ಭಯತೆಯನ್ನು ಸಾರುವವರೊಂದಿಗೆ ಕಾಲ ಕಳೆದದ್ದು ಬಹಳ ವಿಶೇಷ ಅನುಭವವಾಗಿತ್ತು. ನಮ್ಮ ರಾಷ್ಟ್ರಕ್ಕಾಗಿ ಎಲ್ಲವನ್ನೂ ಮಾಡುವ ನಮ್ಮ ಸಶಸ್ತ್ರ ಪಡೆಗಳಿಗೆ ಭಾರತವು ಎಂದೆಂದಿಗೂ ಕೃತಜ್ಞವಾಗಿರುತ್ತದೆ ಎಂದು ಹೇಳಿದ್ದಾರೆ.

**ಧ್ವನಿ ಪ್ರಧಾನ ಮಂತ್ರಿ ( ಸೆಕೆಂಡ್ಸ್)**

**<><*<><>*><>**

ಯೋಧರಿಗೆ ಆತ್ಮಸ್ಥೈರ್ಯ ತುಂಬಲು ಬಿಜೆಪಿಯಿಂದ ತಿರಂಗ ಯಾತ್ರೆ ಆಯೋಜಿಸಲಾಗಿದೆ. ಮೇ ೧೫ರಿಂದ ಯಾತ್ರೆ ಆರಂಭವಾಗಲಿದೆ. ಜಿಲ್ಲೆ ಮತ್ತು ತಾಲೂಕು ಮಟ್ಟದಲ್ಲಿ ಯಾತ್ರೆ ನಡೆಯಲಿದ್ದು, ಸಾವಿರಾರು ಜನರು ಯಾತ್ರೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದರು. ನಗರದ ಜಿಲ್ಲಾ ಬಿಜೆಪಿ ಕಚೇರಿಯ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿಜಯೇಂದ್ರ, ಮೇ ೧೫ ರಂದು ಬೆಂಗಳೂರಿನಲ್ಲಿ ತಿರಂಗ ಯಾತ್ರೆ ಆರಂಭವಾಗಲಿದೆ ಎಂದರು. ಮೇ ೧೫ರಂದು ಮಂಗಳೂರು, ಬೆಳಗಾವಿ ಸೇರಿದಂತೆ ಪ್ರಮುಖ ಜಿಲ್ಲೆಗಳಲ್ಲಿ ನಡೆಯಲಿದೆ. ಮೇ ೧೬ರಂದು ಶಿವಮೊಗ್ಗ ಸೇರಿದಂತೆ ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಯಾತ್ರೆ ನಡೆಯಲಿದೆ. ಮೇ ೧೮ ರಿಂದ ೨೩ರವರಗೆ ತಾಲೂಕು ಕೇಂದ್ರಗಳಲ್ಲಿ ಯಾತ್ರೆ ನಡೆಯಲಿದೆ. ನಿವೃತ್ತ ಯೋಧರು, ಅವರ ಕುಟುಂಬದವರು, ವಿದ್ಯಾರ್ಥಿಗಳು ಸೇರಿದಂತೆ ಎಲ್ಲ ವರ್ಗದ ಜನರನ್ನು ತೊಡಗಿಸಿಕೊಳ್ಳಲಾಗುತ್ತದೆ. ಈ ಯಾತ್ರೆ ಯಶಸ್ವಿಗೊಳಿಸಬೇಕು ಎಂದು ಬಿಜೆಪಿ ಯೋಜನೆ ರೂಪಿಸಿದೆ ಎಂದು ತಿಳಿಸಿದರು. ದೇಶದ ಯೋಧರಿಗೆ ನೈತಿಕ ಸ್ಥೈರ್ಯ ತುಂಬುವ ಕೆಲಸ ಇದಾಗಿದೆ. ತಿರಂಗ ಯಾತ್ರೆಯಲ್ಲಿ ಸಾವಿರಾರು ಸಂಖ್ಯೆಯ ಜನರು ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದರು.

**ಧ್ವನಿ - ವಿಜಯೇಂದ್ರ -**

**<><*<><>*><>**

'ರಾಷ್ಟ್ರ ರಕ್ಷಣೆಗಾಗಿ ನಾಗರಿಕರು' ಅಡಿಯಲ್ಲಿ ಆಪರೇಷನ್ ಸಿಂದೂರದ ಜೊತೆ ನಾವಿದ್ದೇವೆ; ಭಾರತದ ಸೇನೆ ಜೊತೆ ನಾವೆಲ್ಲರೂ ಇದ್ದೇವೆ ಎಂದು ಸಂದೇಶ ನೀಡುವ ಸಲುವಾಗಿ ಮೇ ೧೫ರ ಬೆಳಿಗ್ಗೆ ೧೧.೦೦ ಗಂಟೆಗೆ ಬೆಂಗಳೂರಿನಲ್ಲಿ ತಿರಂಗಾ ಯಾತ್ರೆಯನ್ನು ಕೈಗೊಳ್ಳಲಾಗುವುದು ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ತಿಳಿಸಿದರು. ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಮಲ್ಲೇಶ್ವರದ ಸಂಪಿಗೆ ರಸ್ತೆಯ ಸಿರೂರು ಆಟದ ಮೈದಾನದಿಂದ ಪ್ರಾರಂಭವಾಗಿ ೧೮ನೇ ಕ್ರಾಸ್ ವರೆಗೂ ರಾಷ್ಟ್ರಧ್ವಜದೊಂದಿಗೆ ತಿರಂಗಾ ಯಾತ್ರೆ ಜರುಗಲಿದೆ. ಪಕ್ಷಾತೀತವಾಗಿ ನಡೆಯುವ ಈ ಯಾತ್ರೆಯಲ್ಲಿ ಪಕ್ಷದ ಯಾವುದೇ ಬ್ಯಾನರ್‌ಗಳು ಇರುವುದಿಲ್ಲ ಎಂದು ತಿಳಿಸಿದರು. ಮಾಜಿ ಉಪಮುಖ್ಯಮಂತ್ರಿ ಮತ್ತು ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ್, ವಿಧಾನ ಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ಬಿಜೆಪಿ ರಾಜ್ಯ ಮುಖ್ಯ ವಕ್ತಾರ ಅಶ್ವತ್ಥನಾರಾಯಣ್ ಮತ್ತಿತರರು ಉಪಸ್ಥಿತರಿದ್ದರು.

**<><*<><>*><>**

ಭಾರತ-ಪಾಕಿಸ್ತಾನ ದೇಶಗಳ ನಡುವಿನ ಉದ್ವಿಗ್ನ ಸ್ಥಿತಿ ಈಗ ಶಮನಗೊಂಡಿದೆ. ಆದರೂ ಸರ್ಕಾರದ ಸೂಚನೆಯಂತೆ ತುರ್ತು ಸಂದರ್ಭಗಳಲ್ಲಿ ನಾಗರಿಕರು ರಕ್ಷಣೆ ಮಾಡುವ ಕುರಿತು ನಾಗರಿಕ ಸುರಕ್ಷಾ ಅಣಕು ಪ್ರದರ್ಶವನ್ನು ಮೇ.೧೫ ರಂದು ಬೆಳಿಗ್ಗೆ ೧೧ ಗಂಟೆಗೆ ಚಿತ್ರದುರ್ಗ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಆಯೋಜಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಾಗರೀಕ ರಕ್ಷಣಾ ಕಾರ್ಯ ಚಟುವಟಿಕೆಗಳ ಕುರಿತು ಪರಾಮರ್ಶಿಸಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಷ್ಟ್ರೀಯ ತುರ್ತು ಪರಿಸ್ಥಿತಿ ಮತ್ತು ಪ್ರಕೃತಿ ವಿಕೋಪಗಳಿಂದ ಉಂಟಾಗುವ ಸಂದರ್ಭವನ್ನು ಸಮರ್ಥವಾಗಿ ನಿಭಾಯಿಸಲು ಹಾಗೂ ಇಂತಹ ಸಂದರ್ಭಗಳಲ್ಲಿ ಕಡಿಮೆ ಸಮಯದಲ್ಲಿ, ತುರ್ತಾಗಿ ಸ್ಪಂದನೆ ದೊರಕುವಂತಾಗಲು ಜನರಲ್ಲಿ ಹೆಚ್ಚಿನ ಅರಿವು ಮೂಡಿಸುವುದು ಅಗತ್ಯವಾಗಿರುತ್ತದೆ. ತುರ್ತು ಸಂದರ್ಭಗಳಲ್ಲಿ ಜನರು ಗಾಬರಿಯಾಗದೆ, ವಿವೇಚನೆಯಿಂದ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸುವುದು ಈ ಅಣಕು ಪ್ರದರ್ಶನದ ಉದ್ದೇಶವಾಗಿದೆ ಎಂದು ತಿಳಿಸಿದರು.

**<><*<><>*><>**

ನಂಜನಗೂಡಿನ ಶ್ರೀಕಂಠೇಶ್ವರ ದೇವಸ್ಥಾನದಲ್ಲಿ ಇದೇ ೨೨ ರಂದು ಉಚಿತ ಸಾಮೂಹಿಕ ವಿವಾಹವನ್ನು ಏರ್ಪಡಿಸಲಾಗಿದ್ದು, ಅರ್ಹ ಜೋಡಿಗಳು ಮೇ ೧೫ ರೊಳಗೆ ನೋಂದಾಹಿಸಿಕೊಳ್ಳಬೇಕೆಂದು ಮೈಸೂರು ಅಪರ ಜಿಲ್ಲಾಧಿಕಾರಿ ಡಾ. ಪಿ ಶಿವರಾಜು ಅವರು ತಿಳಿಸಿದರು. ಇಂದು ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಮಾಂಗಲ್ಯ ಭಾಗ್ಯ ಯೋಜನೆಯ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಧುವಿಗೆ ಚಿನ್ನದ ತಾಳಿ ಮತ್ತು ಎರಡು ಚಿನ್ನದ ಗುಂಡು(ಅಂದಾಜು ೮ ಗ್ರಾಂ ತೂಕ)ನೀಡಲಾಗುತ್ತದೆ. ಈ ಯೋಜನೆಯಡಿ ವಿವಾಹವಾಗಲು ಬಯಸುವವರು ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ದೇವಾಲಯ, ನಂಜನಗೂಡಿನ ಶ್ರೀಕಂಠೇಶ್ವರ ಸ್ವಾಮಿ ದೇವಾಲಯ, ತಲಕಾಡಿನ ವೈದ್ಯನಾಥೇಶ್ವರಸ್ವಾಮಿ ಹಾಗೂ ಸಮೂಹ ದೇವಾಲಯಗಳು, ಜಿಲ್ಲಾಧಿಕಾರಿಗಳ ಕಚೇರಿಯ ಧಾರ್ಮಿಕ ದತ್ತಿ ತಹಶೀಲ್ದಾರ್ ಕಛೇರಿ, ಅರಮನೆ ಮುಜರಾಯಿ ದೇವಾಲಯಗಳ ವ್ಯವಸ್ಥಾಪಕರ ಬಳಿ ಹಾಗೂ ಮೈಸೂರು ಜಿಲ್ಲೆಯ ಎಲ್ಲಾ ತಾಲ್ಲೂಕು ತಹಶೀಲ್ದಾರ್ ರವರ ಕಚೇರಿಯಲ್ಲಿ ಅರ್ಜಿಯನ್ನು ಪಡೆದುಕೊಳ್ಳಬಹುದು ಎಂದು ತಿಳಿಸಿದರು. ಸರ್ಕಾರದ ನಿಯಮದಂತೆ ವರನಿಗೆ ಕನಿಷ್ಠ ೨೧ ವರ್ಷ ವಧುವಿಗೆ ಕನಿಷ್ಠ ೧೮ ವರ್ಷ ತುಂಬಿರಬೇಕು. ಮೊದಲನೇ ಮದುವೆಗೆ ಮಾತ್ರ

ಅವಕಾಶವಿದ್ದು, ಎರಡನೇ ಮದುವೆಗೆ ಅವಕಾಶ ಇರುವುದಿಲ್ಲ. ಅಂತರ್ಜಾತಿಯವರಾಗಿದ್ದರೆ ಧೃಢೀಕೃತ ಜಾತಿ ಪ್ರಮಾಣಪತ್ರ ಕಡ್ಡಾಯವಾಗಿ ಹಾಜರುಪಡಿಸಬೇಕು ಎಂದು ತಿಳಿಸಿದರು.

**<><*<><>*><>**

ಭಾರತ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ, ಮೈ ಭಾರತ್ ಸಿವಿಲ್ ಡಿಫೆನ್ಸ್ ಸ್ವಯಂಸೇವಕರಾಗಿ ಸೇರ್ಪಡೆಗೊಳ್ಳಲು ದೇಶಾದ್ಯಂತ ಯುವಕರನ್ನು ಸಕ್ರಿಯವಾಗಿ ಸಜ್ಜುಗೊಳಿಸುತ್ತಿದೆ. ಈ ನಿಟ್ಟಿನಲ್ಲಿ ರಾಷ್ಟ್ರವ್ಯಾಪಿ ಕರೆಯು ಯುವ ನಾಗರಿಕರನ್ನು ರಾಷ್ಟ್ರೀಯ ಉದ್ದೇಶದಲ್ಲಿ, ವಿಶೇಷವಾಗಿ ತುರ್ತು ಪರಿಸ್ಥಿತಿಗಳು ಮತ್ತು ಬಿಕ್ಕಟ್ಟಿನ ಸಮಯದಲ್ಲಿ ಪ್ರಮುಖ ಪಾತ್ರಗಳನ್ನು ವಹಿಸಲು ಸಶಕ್ತಗೊಳಿಸುವ ಒಂದು ಸಂಘಟಿತ ಪ್ರಯತ್ನದ ಭಾಗವಾಗಿದೆ. ನೈಸರ್ಗಿಕ ವಿಕೋಪಗಳು, ಅಪಘಾತಗಳು, ಸಾರ್ವಜನಿಕ ತುರ್ತು ಪರಿಸ್ಥಿತಿಗಳು ಮತ್ತು ಇತರ ಅನಿರೀಕ್ಷಿತ ಸಂದರ್ಭಗಳಲ್ಲಿ ನಾಗರಿಕ ಆಡಳಿತವನ್ನು ಅಭಿನಂದಿಸುವ ಉತ್ತಮ ತರಬೇತಿ ಪಡೆದ, ಸ್ಪಂದಿಸುವ ಮತ್ತು ಚೇತರಿಸಿಕೊಳ್ಳುವ ಸ್ವಯಂಸೇವಕ ಪಡೆಯನ್ನು ನಿರ್ಮಿಸುವ ಗುರಿಯನ್ನು ಹೊಂದಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**